MAY 16, 2024

ALL INDIA RADIO - DHARWAD

PRADESH SAMACHARA (KANNADA) 7:05 AM

<><><>

ಆಕಾಶವಾಣಿ

ಪ್ರದೇಶ ಸಮಾಚಾರ

ಓದಿದವರು: ಹರ್ಷವರ್ಧನ ಶೀಲವಂತ

<><><>

ಮುಖ್ಯಾಂಶಗಳು:

<><><>

- ಬಸವ ತತ್ವ, ಸರ್ವ ಸಮಾನತೆ ಮತ್ತು ಶ್ರಮ ಸಂಸ್ಕೃತಿಗೆ, ಮನ್ನಣೆ ನೀಡಿದ ಧರ್ಮ – ಡಾಕ್ಟರ್ ತೋಂಟದ ಸಿದ್ಧರಾಮ ಸ್ವಾಮೀಜಿ.
- ವಿಧಾನ ಪರಿಷತ್ ಪದವೀಧರ ಹಾಗೂ ಶಿಕ್ಷಕರ ಮತಕ್ಷೇತ್ರಗಳಿಗೆ, ಇಂದು ನಾಮಪತ್ರ ಸಲ್ಲಿಸಲು, ಕೊನೆ ದಿನ.
- ಇಂದು, 'ಡೆಂಘಿ ಜ್ವರ ನಿಯಂತ್ರಣ' ಜನ ಜಾಗ್ರತಿ, ರಾಷ್ಟ್ರೀಯ ದಿನಾಚರಣೆ.
- ಮುಂದಿನ 7 ದಿನ, ರಾಜ್ಯಾದ್ಯಂತ ಬಿರುಗಾಳಿ ಸಹಿತ ಮಳೆ ಸಾಧ್ಯತೆ – ಹವಾಮಾನ ಇಲಾಖೆ, ಮುನ್ಸೂಚನೆ.

<><><>

ಈಗ ವಾರ್ತೆಗಳ ವಿವರ

<><><>

ಬಸವ ತತ್ವ ಸರ್ವ ಸಮಾನತೆಯ ಸಂಸ್ಕೃತಿ; ತ್ರಿವಿಧ ದಾಸೋಹ ಮತ್ತು ಶ್ರಮ ಸಂಸ್ಕೃತಿಗೆ ಮನ್ನಣೆ ನೀಡಿದ ಧರ್ಮ ಎಂದು, ಗದಗ ಡಂಬಳದ ತೋಂಟದಾರ್ಯ ಸಂಸ್ಥಾನ ಮಠದ ತೋಂಟದ ಸಿದ್ಧರಾಮ ಸ್ವಾಮೀಜಿ ನುಡಿದರು. ಧಾರವಾಡದ, ಕರ್ನಾಟಕ ವಿಶ್ವವಿದ್ಯಾಲಯದಲ್ಲಿ, ಬಸವ ಜಯಂತಿ ಮತ್ತು ಶ್ರೀ ಬಸವೇಶ್ವರ ಪೀಠದ ಸುವರ್ಣ ಮಹೋತ್ಸವದ ಧಾರ್ಮಿಕ ಗೋಷ್ಠಿಯಲ್ಲಿ ಅವರು ಮಾತನಾಡಿದರು.

<><><>

ತೋಂಟದ ಸಿದ್ಧರಾಮ ಸ್ವಾಮೀಜಿ ಧ್ವನಿ 35 ಸೆಕೆಂದುಗಳು

<><><>

ಕಾರ್ಯಕ್ರಮದಲ್ಲಿ, ಶರಣ ತತ್ವ, ವಚನ ಸಾಹಿತ್ಯ ಮತ್ತು ಬಸವೇಶ್ವರರ ಕುರಿತಾದ ಒಟ್ಟು 14 ಪುಸ್ತಕಗಳು ಹಾಗೂ ಶ್ರೀ ಬಸವೇಶ್ವರ ಪೀಠದ ಕುರಿತಾದ ಸಾಕ್ಷ್ಯಚಿತ್ರ ಅನಾವರಣಗೊಂಡವು.

ಮೈಸೂರು ಸುತ್ತೂರಿನ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಕಾರ್ಯಕ್ರಮ ಉದ್ಘಾಟಿಸಿದರು.

ಕರ್ನಾಟಕ ವಿಶ್ವವಿದ್ಯಾಲಯದ ಉಪ ಕುಲಪತಿ ಪ್ರೊಫೆಸರ್ ಕೆ.ಬಿ ಗುಡಸಿ ಅಧ್ಯಕ್ಷತೆ ವಹಿಸಿದ್ದರು.

<><><>

ವಿಧಾನಪರಿಷತ್ ಪದವೀಧರ ಹಾಗೂ ಶಿಕ್ಷಕರ ಮತಕ್ಷೇತ್ರಗಳಿಗೆ, ನಾಮಪತ್ರ ಸಲ್ಲಿಕೆ ಮುಂದುವರಿದಿದ್ದು, ಈ ವರೆಗೆ ಒಟ್ಟು 29 ಅಭ್ಯರ್ಥಿಗಳು, 40 ನಾಮಪತ್ರಗಳನ್ನು ಸಲ್ಲಿಸಿದ್ದಾರೆ. ಆಡಳಿತಾರೂಢ ಕಾಂಗ್ರೆಸ್ ಪಕ್ಷದಿಂದ ಐವರು ಅಭ್ಯರ್ಥಿಗಳು, ಬಿಜೆಪಿಯಿಂದ ಮೂವರು ಹಾಗೂ ಜೆ.ಡಿ.ಎಸ್ ಪಕ್ಷದಿಂದ ಓರ್ವ ಉಮೇದುವಾರ ಮತ್ತು ಪಕ್ಷೇತರ 20 ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಿದ್ದಾಗಿ, ರಾಜ್ಯ ಮುಖ್ಯ ಚುನಾವಣಾಧಿಕಾರಿ ಕಚೇರಿ ಮಾಹಿತಿ ನೀಡಿದೆ.

<><><>

ಜೆ.ಡಿ.ಎಸ್ ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಎಚ್.ಡಿ.ದೇವೇಗೌಡರು, ವಿಧಾನ ಪರಿಷತ್ ಚುನಾವಣೆ ಪಕ್ಷದ ಅಭ್ಯರ್ಥಿ ವಿವೇಕಾನಂದ ಅವರಿಗೆ, ಬಿ ಫಾರ್ಮ್ ನೀಡಿದ್ದಾರೆ.

<><><>

ಶಾಸಕ ಜಿ.ಟಿ.ದೇವೇಗೌಡ ಮಾತನಾಡಿ, ಜೆಡಿಎಸ್–ಬಿಜೆಪಿ ಮೈತ್ರಿ ಅಭ್ಯರ್ಥಿಯಾಗಿ ವಿವೇಕಾನಂದ ಅವರು ಸ್ಪರ್ಧಿಸಲಿದ್ದಾರೆ. ಇಂದು ಮಧ್ಯಾಹ್ನ ಅವರು ನಾಮಪತ್ರ ಸಲ್ಲಿಸಲಿದ್ದಾರೆ ಎಂದು, ತಿಳಿಸಿದರು.

<><><>

ಇಂದು ನಾಮಪತ್ರ ಸಲ್ಲಿಕೆಗೆ ಕೊನೆ ದಿನ. ಶುಕ್ರವಾರ 17 ರಂದು ನಾಮಪತ್ರಗಳ ಪರಿಶೀಲನೆ ನಡೆಯಲಿದೆ. ಇದೇ 20, ಸೋಮವಾರ ನಾಮಪತ್ರ ಹಿಂಪಡೆಯಲು ಕೊನೆಯ ದಿನ. ಜೂನ್ 3 ರಂದು ಸೋಮವಾರ ಚುನಾವಣೆ ನಡೆಯಲಿದೆ. ಜೂನ್ 6, ಗುರುವಾರ ಮತ ಎಣಿಕೆ ನಡೆಯಲಿದೆ.

<><><>

ವಿಜಯನಗರ ಜಿಲ್ಲೆಯ, ಹೊಸಪೇಟೆ, ಕಮಲಾಪುರ ಹೋಬಳಿಗಳಲ್ಲಿ, ಅಂದಾಜು 188 ಹೆಕ್ಟೇರ್‌ನಷ್ಟು ತೋಟಗಾರಿಕೆ ಬೆಳೆಗಳಿಗೆ ಹಾನಿಯಾಗಿದೆ ಎಂದು, ಇಲಾಖೆಯ ಅಧಿಕಾರಿಗಳು ವರದಿ ಸಲ್ಲಿಸಿದ್ದಾಗಿ, ಜಿಲ್ಲಾಧಿಕಾರಿ ಎಂ.ಎಸ್.ದಿವಾಕರ ತಿಳಿಸಿದ್ದಾರೆ. ಜಿಲ್ಲೆಯ ಕೊಟ್ಟೂರು ತಾಲೂಕಿನಲ್ಲಿ ಓರ್ವ ವ್ಯಕ್ತಿ ಹಾಗೂ ಹರಪನಹಳ್ಳಿ ತಾಲೂಕಿನಲ್ಲಿ ಓರ್ವ ವ್ಯಕ್ತಿ, ಮಳೆಯಿಂದ ಮೃತಪಟ್ಟಿದ್ದಾರೆ. ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರದ ನಿಯಮಾಳಿ ಅನುಸಾರ, ತಲಾ 5 ಲಕ್ಷ ರೂಪಾಯಿಗಳ ಪರಿಹಾರ ಕುಟುಂಬಸ್ಥರಿಗೆ ನೀಡಲಾಗಿದೆ. 6 ದೊಡ್ಡ 6 ಸಣ್ಣ ಜಾನುವಾರುಗಳು ಮೃತಪಟ್ಟಿವೆ. ಜಿಲ್ಲೆಯಲ್ಲಿ ಒಟ್ಟು 14 ಮನೆಗಳು ಮಳೆಯಿಂದ ಹಾನಿಗೊಳಗಾಗಿದ್ದು, ನಿಯಮಾನುಸಾರ ಪರಿಹಾರ ವಿತರಣೆ ಮಾಡಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ತಿಳಿಸಿದ್ದಾರೆ.

<><><>

ಅತ್ಯಂತ ದುಬಾರಿ ಮಾವು, ಜಪಾನ್ ಮೂಲದ, 'ಮೀಯಾ ಜಾಕಿ' ಗಿಡಗಳನ್ನು ಬೆಳೆಸುವ ಪ್ರಾಯೋಗಿಕ ಪ್ರಯತ್ನವನ್ನು, ವಿಜಯಪುರದ ಯುತ ರೈತ ಹಾಗೂ ಬಾಗಲಕೋಟೆ ಲೋಕೋಪಯೋಗಿ ಇಲಾಖೆಯ ಸಹಾಯಕ ಅಭಿಯಂತರ, ಅಷ್ಫಾಕ್ ಪಾಟೀಲ, ಮಾಡಿದ್ದಾರೆ. ಪ್ರದೇಶ ಸಮಾಚಾರಕ್ಕಾಗಿ ಅವರು ತಮ್ಮ ಅನುಭವ ಹಂಚಿಕೊಂಡಿದ್ದಾರೆ.

<><><>

ಅಷ್ಫಾಕ್ ಪಾಟೀಲ ಧ್ವನಿ 50 ಸೆಕೆಂದುಗಳು

<><><>

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..

<><><>

'ಸಮುದಾಯದೊಂದಿಗೆ ಸೇರಿ, ಡೆಂಘಿ ಜ್ವರ ನಿಯಂತ್ರಿಸೋಣ' ಎಂಬ ಧ್ಯೇಯದೊಂದಿಗೆ, ಇಂದು, ಡೆಂಘಿ ಜ್ವರ ನಿಯಂತ್ರಣ, ಜನ ಜಾಗ್ರತಿ ರಾಷ್ಟ್ರೀಯ ದಿನ, ರಾಜ್ಯಾದ್ಯಂತ ಜರುಗಲಿದೆ ಎಂದು ನಮ್ಮ ಪ್ರತಿನಿಧಿಗಳು ವರದಿ ಮಾಡಿದ್ದಾರೆ.

<><><>

ಚಿಕ್ಕಮಗಳೂರು ಜಿಲ್ಲೆಯಲ್ಲಿ 85 ಡೆಂಘಿ ಪ್ರಕರಣಗಳು ಪತ್ತೆಯಾಗಿವೆ ಎಂದು ಜಿಲ್ಲಾ ಸರ್ವೇಕ್ಷಣ ಅಧಿಕಾರಿ ಡಾಕ್ಟರ್ ಭರತ್ ಮಾಹಿತಿ ನೀಡಿದ್ದಾರೆ.

<><><>

ರಾಷ್ಟ್ರೀಯ ರೋಗ ವಾಹಕಗಳನ್ನು ಆಶ್ರಯಿಸಿ, ಹಬ್ಬುವ ರೋಗಗಳ ನಿಯಂತ್ರಣ ಯೋಜನೆ ಅಡಿ, ಇಂದು ದಾವಣಗೆರೆ ಜಿಲ್ಲೆಯಲ್ಲಿ, ಡೆಂಘಿ ಜ್ವರ ನಿಯಂತ್ರಣ, ಜನ ಜಾಗ್ರತಿ ರಾಷ್ಟ್ರೀಯ ದಿನ, ಆಯೋಜಿಸಲಾಗಿದೆ ಎಂದು, ಜಿಲ್ಲಾ ಕೀಟ ಜನ್ಯ ರೋಗ ನಿಯಂತ್ರಣಾಧಿಕಾರಿ, ಡಾಕ್ಟರ್ ಮುರುಳೀಧರ ತಿಳಿಸಿದ್ದಾರೆ. ಜನವರಿಯಿಂದ ಇಲ್ಲಿಯ ವರೆಗೂ, ದಾವಣಗೆರೆ ಜಿಲ್ಲೆಯಲ್ಲಿ, 89 ಡೆಂಘಿ ಜ್ವರದ ಪ್ರಕರಣಗಳು ಪತ್ತೆಯಾಗಿವೆ. ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ, ಡಾಕ್ಟರ್ ಮುರಳೀಧರ.

<><><>

ಡಾಕ್ಟರ್ ಮುರಳೀಧರ ಧ್ವನಿ 50 ಸೆಕೆಂದುಗಳು

<><><>

ಮುಂದಿನ 7 ದಿನಗಳ ಕಾಲ ರಾಜ್ಯಾದ್ಯಂತ, ಗುಡುಗು, ಮಿಂಚು, ಬಿರುಗಾಳಿ ಸಹಿತ ಮಳೆಯಾಗಲಿದೆ ಎಂದು, ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಗಾಳಿಯ ವೇಗ ಗಂಟೆಗೆ 50 ರಿಂದ 60 ಕಿಲೋ ಮೀಟರ್ ತಲುಪುವ ಸಾಧ್ಯತೆ ಇದೆ. ರಾಜ್ಯದ ಕರಾವಳಿ ಮತ್ತು ಮಲೆನಾಡು ಜಿಲ್ಲೆಗಳಲ್ಲಿ, ಸಾಧಾರಣ ಮಳೆ ಹಾಗೂ ಅಲ್ಲಲ್ಲಿ ಭಾರಿ ಮಳೆಯಾಗಲಿದೆ. ಕೊಡಗು, ದಾವಣಗೆರೆ, ಶಿವಮೊಗ್ಗ, ಚಿಕ್ಕಮಗಳೂರು, ದಕ್ಷಿಣಕನ್ನಡ, ಉಡುಪಿ ಜಿಲ್ಲೆಗಳಲ್ಲಿ ಭಾರೀ ಮಳೆ ಸಾಧ್ಯತೆ ಹಾಗೂ ಬಾಗಲಕೋಟೆ, ಬೀದರ್, ಗದಗ, ಕೊಪ್ಪಳ, ರಾಯಚೂರಿನಲ್ಲಿ ಸಾಧಾರಣ ಮಳೆಯಾಗುವ ಸಾಧ್ಯತೆ ಇದೆ. 11 ಜಿಲ್ಲೆಗಳಿಗೆ ಇಂದು ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ ಎಂದು, ಹವಾಮಾನ ಇಲಾಖೆ ತಿಳಿಸಿದೆ.

<><><>

ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ರಾಜ್ಯಕ್ಕೆ ಮೊದಲ ರ್‍ಯಾಂಕ್ ಪಡೆದ, ಬಾಗಲಕೋಟೆ ಜಿಲ್ಲೆ, ಮುಧೋಳ ತಾಲೂಕು, ಮೆಳ್ಳಿಗೇರಿಯ ಮೊರಾರ್ಜಿ ವಸತಿ ಶಾಲೆ ವಿದ್ಯಾರ್ಥಿನಿ, ಅಂಕಿತಾ ಬಸಪ್ಪ ಕೊಣ್ಣೂರು ಹಾಗೂ ಮೂರನೇ ರ್‍ಯಾಂಕ್ ಪಡೆದ, ಮಂಡ್ಯ ಜಿಲ್ಲೆಯ ಕಣಲಿ ಗ್ರಾಮದ ನವನೀತ್ ಅವರನ್ನು, ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರು, ಬೆಂಗಳೂರಿನ ತಮ್ಮ ಕಚೇರಿಯಲ್ಲಿ ಸನ್ಮಾನಿಸಿದರು.

<><><>

ನೈಋತ್ಯ ರೈಲ್ವೆ ಸುರಕ್ಷತಾ ದಳ 2024ರ ಏಪ್ರಿಲ್‌ನಲ್ಲಿ ಆಪರೇಷನ್ *'ನನ್ಹೆ ಫರಿಷ್ತೇ'* ಕಳೆದುಹೋದ ಮಕ್ಕಳನ್ನು ರಕ್ಷಿಸುವ ಕಾರ್ಯಕ್ರಮದಡಿ, ನಾಲ್ವರು ಬಾಲಕಿಯರು ಸೇರಿ, 22 ಮಕ್ಕಳನ್ನು ರಕ್ಷಿಸಿದೆ. ಆಪರೇಷನ್ *'ಉಪಲಬ್ಧ್'* ಯೋಜನೆ ಅಡಿ, ರೈಲ್ವೆ ಸುರಕ್ಷತಾ ದಳ, 24 ದಲ್ಲಾಳಿಗಳನ್ನು ಬಂಧಿಸಿದೆ.

<><><>

ಈಗ ಸಂಕ್ಷಿಪ್ತ ಸುದ್ದಿಗಳು:

<><><>

ಮಾಜಿ ಪ್ರಧಾನಮಂತ್ರಿ, ರಾಜೀವ್ ಗಾಂಧಿ ಜ್ಯೋತಿ ರಥ ಯಾತ್ರೆಗೆ, ಬೆಂಗಳೂರಿನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಚಾಲನೆ ನೀಡಿದರು.

<><><>

ಎಸ್.ಎಸ್.ಎಲ್.ಸಿ ಪರೀಕ್ಷೆ – 2ಕ್ಕೆ, ಹಾಜರಾಗ ಬಯಸುವ, ವಿದ್ಯಾರ್ಥಿಗಳಿಗೆ ಬುಧವಾರದಿಂದ ವಿಶೇಷ ತರಗತಿಗಳು ಆರಂಭವಾಗಿವೆ.

<><><>

ಉಡುಪಿ ಜಿಲ್ಲೆ, ಮಲ್ಪೆ ಬಂದರು ವ್ಯಾಪ್ತಿಯಲ್ಲಿ ಹಾಗೂ ಸೀವಾಕ್ ಪ್ರದೇಶದಲ್ಲಿ ಪ್ರವಾಸಿ ದೋಣಿ ಮತ್ತು ಸೇಂಟ್ ಮೇರೀಸ್ ದ್ವೀಪಕ್ಕೆ ಪ್ರವಾಸಿಗರನ್ನು ಕರೆದೊಯ್ಯುವ ಬೋಟ್ ಚಟುವಟಿಕೆಗಳನ್ನು, ಇಂದಿನಿಂದ ಸೆಪ್ಟೆಂಬರ್ 15ರ ವರೆಗೆ, ಹಾರ್ಬರ್ ಕ್ರಾಫ್ಟ್ ನಿಯಮಗಳ ಅನ್ವಯ ಸ್ಥಗಿತಗೊಳಿಸಲಾಗಿದೆ ಎಂದು, ಉಡುಪಿ ನಗರಸಭೆ ಪೌರಾಯುಕ್ತರು ತಿಳಿಸಿದ್ದಾರೆ.

<><><>

ರಾಷ್ಟ್ರೀಯ ತಂಬಾಕು ನಿಯಂತ್ರಣ, ಕೋಟ್ಪಾ–2003ರ ಕಾಯ್ದೆ ಅಡಿ, ಚಿತ್ರದುರ್ಗ ಜಿಲ್ಲಾ ತಂಬಾಕು ನಿಯಂತ್ರಣ ಕೋಶ, ನಗರದ ವಿವಿಧ ಪ್ರದೇಶಗಳಲ್ಲಿ ದಾಳಿ ನಡೆಸಿ, ದಂಡ ವಿಧಿಸಿದೆ.

<><><>

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು:

<><><>

- ಬಸವ ತತ್ವ, ಸರ್ವ ಸಮಾನತೆ ಮತ್ತು ಶ್ರಮ ಸಂಸ್ಕೃತಿಗೆ, ಮನ್ನಣೆ ನೀಡಿದ ಧರ್ಮ – ಡಾಕ್ಟರ್ ತೋಂಟದ ಸಿದ್ಧರಾಮ ಸ್ವಾಮೀಜಿ.
- ವಿಧಾನ ಪರಿಷತ್ ಪದವೀಧರ ಹಾಗೂ ಶಿಕ್ಷಕರ ಮತಕ್ಷೇತ್ರಗಳಿಗೆ, ಇಂದು ನಾಮಪತ್ರ ಸಲ್ಲಿಸಲು, ಕೊನೆ ದಿನ.
- ಇಂದು, 'ಡೆಂಘಿ ಜ್ವರ ನಿಯಂತ್ರಣ' ಜನ ಜಾಗ್ರತಿ, ರಾಷ್ಟ್ರೀಯ ದಿನಾಚರಣೆ.
- ಮುಂದಿನ 7 ದಿನ, ರಾಜ್ಯಾದ್ಯಂತ ಬಿರುಗಾಳಿ ಸಹಿತ ಮಳೆ ಸಾಧ್ಯತೆ – ಹವಾಮಾನ ಇಲಾಖೆ, ಮುನ್ಸೂಚನೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಗ್ಗೆ 7.35 ಕ್ಕೆ.

<><><>

ಹರ್ಷ